**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/03/ಇಎಪಿ/2025

ಆಯುಕ್ತರವರ ಕಛೇರಿ,
ಕಾಲೇಜು ಮತ್ತುತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆರಸ್ತೆ, ಬೆಂಗಳೂರು-560001,
ದಿನಾಂಕ: 06.06.2025

ಇವರಿಗೆ:

ಎಲ್ಲಾ ಸರ್ಕಾರಿ / ಅನುದಾನಿತ / ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ

ಮಾನ್ಯರೆ,

ವಿಷಯ: ಏಪ್ರಿಲ್/ಮೇ - 2025 ರ ಡಿಪ್ಲೊಮಾ ಸೆಮಿಸ್ಟರ್ ಪರೀಕ್ಷೆಯ ಫಲಿತಾಂಶವನ್ನು ಪ್ರಕಟಿಸುವ ಬಗ್ಗೆ.

*-*-*-*-*-*

2025 ರ ಏಪ್ರಿಲ್/ಮೇ ತಿಂಗಳಲ್ಲಿ ನಡೆಸಲಾದ ಸೆಮಿಸ್ಟರ್ ಪದ್ಧತಿಯ ಡಿಪ್ಲೋಮಾ ಪರೀಕ್ಷೆಯ ಫಲಿತಾಂಶಗಳನ್ನು ದಿನಾಂಕ: 06.06.2025 ರ ಶುಕ್ರವಾರ ಅಪರಾಹ್ನ 3.00 ಗಂಟೆಗೆ ಪ್ರಕಟಿಸಲಾಗುತ್ತದೆ. BTELinx ವೆಬ್ ಪೋರ್ಟಲ್ ಮೂಲಕ ಕಾರ್ಯದರ್ಶಿಯವರ ಮುದ್ರಿತ ಸಹಿ ಇರುವ ತಮ್ಮ ಸಂಸ್ಥೆಯ ಫಲಿತಾಂಶವನ್ನು ಪಡೆದು ಒಂದು ಪ್ರತಿಯನ್ನು ಮೇಲೆ ತಿಳಿಸಿದ ದಿನಾಂಕದಂದು ಅಪರಾಹ್ನ 3.00 ಗಂಟೆಗೆ ನಿಮ್ಮ ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಲಾಗಿರುತ್ತದೆ.

ಏಪ್ರಿಲ್/ಮೇ - 2025 ರ ಪರೀಕ್ಷೆಯ ಮರು ಮೌಲ್ಯಮಾಪನ/ಫೋಟೊ ಪ್ರತಿಗೆ ಅರ್ಜಿ ಸಲ್ಲಿಸುವ ಬಗ್ಗೆ ಸುತ್ತೋಲೆಯನ್ನು ಪ್ರಕಟಿಸಲಾಗಿದೆ.

ಪ್ರವೇಶ ಅನುಮೋದನೆ ಪಡೆಯದ ಹಾಗೂ ಇತರೆ ಕಾರಣಗಳಿಗಾಗಿ ಅನರ್ಹರಾದ ಅಭ್ಯರ್ಥಿಗಳ ಅಂಕಪಟ್ಟಿಗಳನ್ನು ತಡೆಹಿಡಿಯಲಾಗುವುದೆಂದು ತಿಳಿಸಲಾಗಿದೆ. ಇಂತಹ ಪ್ರಕರಣಗಳಲ್ಲಿ ಸಂಸ್ಥೆಯವರು ಮಂಡಳಿಯ ಪತ್ರಕ್ಕಾಗಿ ಕಾಯದೇ ಅಗತ್ಯವಾದ ದಾಖಲೆಗಳನ್ನು ಕಳುಹಿಸಿದ ನಂತರವೇ ಫಲಿತಾಂಶ ಪ್ರಕಟಿಸಿ ಅಂಕಪಟ್ಟಿಗಳನ್ನು ಕಳುಹಿಸಲಾಗುವುದಾಗಿ ತಿಳಿಸಲಾಗಿದೆ. ಪ್ರವೇಶಾನುಮೋದನೆಯಾಗದ / ಇತರೆ ಕಾರಣಗಳಿಗಾಗಿ ಅನರ್ಹರಾದವರ ಫಲಿತಾಂಶ ಪ್ರಕಟವಾಗಿದ್ದಲ್ಲಿ ಅಂಥ ಪ್ರಕರಣಗಳ ಬಗ್ಗೆ ಪ್ರಿನ್ಸಿಪಾಲರು ಕೂಡಲೇ ಪ್ರತ್ಯೇಕವಾಗಿ ಮಂಡಳಿಯ ಗಮನಕ್ಕೆ ತರಲು ಸೂಚಿಸಲಾಗಿದೆ.

ಸೆಮಿಸ್ಟರ್ ಪದ್ಧತಿಯ ಅಭ್ಯರ್ಥಿಗಳ ತಡೆ ಹಿಡಿಯಲಾದ ಫಲಿತಾಂಶವನ್ನು ಅಭ್ಯರ್ಥಿಗಳ ನೋಂದಣಿ ಸಂಖ್ಯೆಯುಳ್ಳ ಅರ್ಜಿ, ಹಾಜರಾದ ಬಗ್ಗೆ ಮಾಹಿತಿ, ಹಿಂದೆ ಪರೀಕ್ಷೆಗೆ ಹಾಜರಾದ ಅಂಕಪಟ್ಟಿಯ ಜೆರಾಕ್ಸ್ ಪ್ರತಿ ಹಾಗೂ ಪರೀಕ್ಷಾ ಶುಲ್ಕ ಕಟ್ಟಿದ ರಶೀದಿಯೊಂದಿಗೆ ಫಲಿತಾಂಶ ಪ್ರಕಟವಾದ ಹದಿನೈದು ದಿನಗಳೊಳಗಾಗಿ (ದಿನಾಂಕ:20/06/2025) ಪೂರ್ಣ ಮಾಹಿತಿಯನ್ನು ಸಲ್ಲಿಸಿ ತಪ್ಪದೇ ಫಲಿತಾಂಶ ಪಡೆಯುವಂತೆ ತಿಳಿಸಲಾಗಿದೆ. ತಪ್ಪಿದಲ್ಲಿ ಆ ಸಂಸ್ಥೆಯ ಪ್ರಿನ್ಸಿಪಾಲರೇ ಜವಾಬ್ದಾರರಾಗಿರುತ್ತಾರೆ.

ವಿಶೇಷ ಸೂಚನೆ:-

ಏಪ್ರಿಲ್/ಮೇ 2025 ರ ಸೆಮಿಸ್ಟರ್ ಪರೀಕ್ಷೆಗಳ ಥಿಯರಿ ಉತ್ತರ ಪತ್ರಿಕೆಗಳ ಫೋಟೋ ಪ್ರತಿ / ಮರು ಮೌಲ್ಯಮಾಪನಕ್ಕೆ ತಮ್ಮ ಸಂಸ್ಥೆಯ ವಿದ್ಯಾರ್ಥಿಗಳು ಸಲ್ಲಿಸಿದ ಅರ್ಜಿಗಳ ವಿವರಗಳನ್ನು ಈಗಾಗಲೇ BTELinx ವೆಬ್ ಪೋರ್ಟಲ್ ಮೂಲಕ Online ನಲ್ಲಿ Update ಮಾಡಬೇಕಾಗಿರುತ್ತದೆ. ಪ್ರತಿ ಅರ್ಜಿಯ ವಿವರಗಳನ್ನು ಆನ್‌ಲೈನ್‌ನಲ್ಲಿ Update ಮಾಡಿದ ನಂತರ ಬರುವಂತಹ ಒಂದು Acknowledgement Slip ಪ್ರಿಂಟ್ ತೆಗೆದು ಆಯಾ ಅರ್ಜಿಗಳಿಗೆ ಲಗತ್ತಿಸಿ ಸದರಿ ಅರ್ಜಿಗಳನ್ನು ತಮ್ಮ ಮೇಲು ರುಜು ಮಾಡಿ ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು,

ಇವರಿಗೆ ದಿನಾಂಕ: 16/06/2025 ರೊಳಗಾಗಿ ರವಾನಿಸಲು ಎಲ್ಲಾ ಪ್ರಿನ್ಸಿಪಾಲರುಗಳಿಗೆ ತಿಳಿಸಲಾಗಿದೆ.

BTELinx ನಲ್ಲಿ ವಿದ್ಯಾರ್ಥಿಗಳ ವಿವರಗಳನ್ನು Update ಮಾಡಿ Acknowledgement Slip ನ್ನು ಲಗತ್ತಿಸದೇ ಸಲ್ಲಿಸುವ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲವೆಂದು ತಿಳಿಸಲಾಗಿದೆ.

ತಮ್ಮ ನಂಬುಗೆಯ,

ಕಾರ್ಯದರ್ಶಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಬೆಂಗಳೂರು.

ಇವರಿಗೆ,
ಎಲ್ಲಾ ಸರ್ಕಾರಿ / ಅನುದಾನಿತ / ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ - ಮುಂದಿನ ಸೂಕ್ತ ಕ್ರಮಕ್ಕಾಗಿ.

ಪ್ರತಿ:
1. ಆಯುಕ್ತರ ಆಪ್ತ ಶಾಖೆ - ಅವಗಾಹನೆಗಾಗಿ.
2. ನಿರ್ದೇಶಕರ ಆಪ್ತ ಶಾಖೆ- ಅವಗಾಹನೆಗಾಗಿ.
3. ಸಹಾಯಕ ನಿರ್ದೇಶರು (ಎಸಿಎಂ)
4. ಇ-ಗವರ್ನೆನ್ಸ್ ವಿಭಾಗಕ್ಕೆ (ವೆಬ್ ಸೈಟ್‌ನಲ್ಲಿ ಪ್ರಕಟಿಸಲು)
5. ಇಸಿಎಸ್/ಇಎಫ್‌ಎಸ್/ಇಆರ್‌ಎಸ್, ಮುಂದಿನ ಕ್ರಮಕ್ಕಾಗಿ.
6. ಸಾರ್ವಜನಿಕ ಸಂಪರ್ಕಾಧಿಕಾರಿ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
7. ರಿಜಿಸ್ಟ್ರಾರ್ (ಪರೀಕ್ಷೆ)
8. ಕಾರ್ಯದರ್ಶಿಯವರ ಆಪ್ತ ಶಾಖೆ.
9. ಉಪ ನಿರ್ದೇಶಕರು (ಪರೀಕ್ಷೆ)
10. ಅಧೀಕ್ಷಕರು ಆರ್ ಡಿ ಎಂ (01)ರಿಂದ (15)
11. ಗಣಕ ಕೇಂದ್ರ ಬಿಟಿಇ ಲಿಂಕ್ಸ್ ವೆಬ್ ಪೋರ್ಟಲ್ ನಲ್ಲಿ ಪ್ರಕಟಿಸಲು.
12. ಕಚೇರಿ ಪ್ರತಿ.